# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ರಘು ಆರ್. |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 522(578) |
| ಉತ್ತರಿಸಬೇಕಾದ ದಿನಾಂಕ | 20.08.2026 |
| ಉತ್ತರಿಸುವ ಸಚಿವರು | ನಗರಾಭಿವೃದ್ಧಿ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವನ್ನು ಉನ್ನತೀಕರಣಗೊಳಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು) | ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ 2024ನ್ನು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆಯ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 66 ಶಾಸನ 2024, ದಿನಾಂಕ:14.05.2025ರನುಸಾರ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿರುತ್ತದೆ.<br><br>ಮೈಸೂರು ಅಭಿವೃದ್ಧಿ ಪ್ರಾಧಿಕಾರ ವಿಧೇಯಕ 2024ನ್ನು ದಿನಾಂಕ:14.05.2025 ರನ್ವಯ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 03 ಮೈಅಪ್ರಾ 2021(ಇ), ದಿನಾಂಕ:23.05.2025 ರಲ್ಲಿ ವಿಘಟಿತಗೊಳಿಸಿ, ಮೈಸೂರು ಅಭಿವೃದ್ಧಿ ಪ್ರಾಧಿಕಾರವನ್ನು ಜಾರಿಗೆ ತರಲಾಗಿದೆ ಹಾಗೂ ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 2024ರ 3ನೇ ಪ್ರಕರಣದ 1ನೇ ಉಪ ಪ್ರಕರಣದ ಮೇರೆಗೆ "ಮೈಸೂರು ಅಭಿವೃದ್ಧಿ ಪ್ರಾಧಿಕಾರ" ವನ್ನು ರಚಿಸಿ ಉನ್ನತೀಕರಣಗೊಳಿಸಲಾಗಿದೆ. |
| (ಆ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರವನ್ನು ರಚಿಸಲು ಕಾರಣಗಳೇನು; ಈವರೆಗೂ ನಿಯಮದ ಪ್ರಕಾರ ಪ್ರಾದೇಶಿಕ ಆಯುಕ್ತರ ದರ್ಜೆಯ ಅಧಿಕಾರಿಯನ್ನು ನೇಮಿಸದಿರಲು ಕಾರಣವೇನು; (ಮಾಹಿತಿ ನೀಡುವುದು) | ಮೈಸೂರು ನಗರ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳ ಯೋಜನಾಬದ್ಧ ಹಾಗೂ ಸಮಗ್ರ ಅಭಿವೃದ್ಧಿಗಾಗಿ ಮೈಸೂರು ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಲಾಗಿದೆ.<br><br>ಮೈಸೂರು ಅಭಿವೃದ್ಧಿ ಪ್ರಾಧಿಕಾರದ ಅಧಿನಿಯಮ, 2024 ರ ಕಲಂ 12ರನ್ವಯ ಭಾರತೀಯ ಆಡಳಿತ ಸೇವೆಯ ಶ್ರೇಣಿಯ ಅಧಿಕಾರಿ ಅಥವಾ ಕರ್ನಾಟಕ ಆಡಳಿತ ಸೇವೆಯ ಹಿರಿಯ ಶ್ರೇಣಿ ಮತ್ತು ಅದಕ್ಕೂ ಮೇಲಿನ ಶ್ರೇಣಿಯ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತರನ್ನಾಗಿ ನೇಮಿಸಲು ಅವಕಾಶ ಕಲ್ಪಿಸಲಾಗಿದೆ. ಆಡಳಿತಾತ್ಮಕ ಹಿತದೃಷ್ಟಿಯಿಂದ ಅಧಿಕಾರಿಗಳನ್ನು ಸಕ್ಷಮ ಪ್ರಾಧಿಕಾರವಾದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಪ್ರಭಾರದಲ್ಲಿರಿಸಿರುತ್ತದೆ.<br><br>ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ವಿಜಿಲೆನ್ಸ್ ಕಮಿಟಿಯನ್ನು ನಿಯಮಾನುಸಾರ ರಚಿಸಲು ಕಾಯ್ದೆ / ನಿಯಮಗಳಲ್ಲಿ ಆಸ್ಪದ ಕಲ್ಪಿಸಿರುವುದಿಲ್ಲ. |
| (ಇ) | ಸದರಿ ಕಿರಿಯ ಶ್ರೇಣಿಯ ಅಧಿಕಾರಿಗಳಿಗೆ ಪ್ರಭಾರವಿರಿಸಲು ಕಾರಣಗಳೇನು; ಪ್ರಾಧಿಕಾರದಲ್ಲಿ ನಿಯಮಾನುಸಾರ ವಿಜಿಲೆನ್ಸ್ ಕಮಿಟಿಯನ್ನು ರಚಿಸದಿರಲು ಕಾರಣವೇನು; ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಸಂಪೂರ್ಣ ಮಾಹಿತಿ ನೀಡುವುದು) | |

**ಸಂಖ್ಯೆ :ನಅಇ 361 ಮೈಅಪ್ರಾ 2026(ಇ)**

**(ಡಾ. ಯತೀಂದ್ರ ಸಿದ್ದರಾಮಯ್ಯ)**
ನಗರಾಭಿವೃದ್ಧಿ ಸಚಿವರು